# ಭಾಗ–9

# ಅಂತರರಾಷ್ಟ್ರೀಯ ಸುದ್ದಿಗಳು

## 1. ಭಾರತದಲ್ಲಿ ಗೂಗಲ್ 75 ಸಾವಿರ ಕೋಟಿ ಹೂಡಿಕೆ

ಭಾರತದ ಡಿಜಿಟಲೀಕರಣಕ್ಕಾಗಿ ರೂ. 75 ಸಾವಿರ ಕೋಟಿಗಳನ್ನು (10 ಬಿಲಿಯನ್ ಡಾಲರ್) ಹೂಡಿಕೆ ಮಾಡುವುದಾಗಿ ಆಲ್ಫಾಬೆಟ್ ಮತ್ತು ಗೂಗಲ್ ಸಂಸ್ಥೆಯ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಸುಂದರ್ ಪಿಚ್ಛೈ ತಿಳಿಸಿದ್ದಾರೆ. 6ನೇ 'ಗೂಗಲ್ ಫಾರ್ ಇಂಡಿಯಾ' ಕಾರ್ಯಕ್ರಮದ ನೇರ ಪ್ರಸಾರದಲ್ಲಿ ಮಾತನಾಡಿದ ಪಿಚ್ಛೈ ಮುಂದಿನ 5–7 ವರ್ಷಗಳ ಅವಧಿಯಲ್ಲಿ ಡಿಜಿಟಲ್ ಇಂಡಿಯಾ ಅಭಿವೃದ್ಧಿಗಾಗಿ ಈ ಹಣವನ್ನು ಹೂಡಿಕೆ ಮಾಡಲಾಗುವುದು ಎಂದು ತಿಳಿಸಿದರು.

ಈ ಕಾರ್ಯಕ್ರಮಕ್ಕೂ ಮೊದಲು ಬೆಳಗ್ಗೆ ಪ್ರಧಾನಿ ಮೋದಿ ಅವರು ಪಿಚ್ಛೈ ಜೊತೆ ವರ್ಚುವಲ್ ಸಂವಾದ ನಡೆಸಿದರು. ರೈತರು ಮತ್ತು ಯುವ ಸಮುದಾಯದ ಬದುಕನ್ನು ಬದಲಿಸಲು ತಂತ್ರಜ್ಞಾನದ ಸಾಮರ್ಥ್ಯವನ್ನು ಬಳಸಿಕೊಳ್ಳುವ ಸಾಧ್ಯತೆಗಳ ಬಗ್ಗೆ ಇಬ್ಬರೂ ಮುಖಂಡರು ಚರ್ಚೆ ನಡೆಸಿದರು. ಈ ಸಂವಾದದ ಚಿತ್ರವೊಂದನ್ನು ಟ್ವಿಟರ್‌ನಲ್ಲಿ ಮೋದಿ ಹಂಚಿಕೊಂಡಿದ್ದಾರೆ.

'ಪಿಚ್ಛೈ ಜೊತೆಗೆ ಸಂವಾದ ನಡೆಸಿದೆ. ಸಂವಾದ ಫಲಪ್ರದವಾಗಿತ್ತು. ಹಲವು ವಿಚಾರಗಳ ಬಗ್ಗೆ ನಾವು ವಿಸ್ಕೃತ ಚರ್ಚೆ ನಡೆಸಿದೆವು. ಅದರಲ್ಲೂ ವಿಶೇಷವಾಗಿ, ರೈತರು, ಉದ್ಯಮಿಗಳು ಮತ್ತು ಯುವ ಸಮುದಾಯದ ಬದುಕನ್ನು ಬದಲಿಸಲು ತಂತ್ರಜ್ಞಾನ ಸಾಮರ್ಥ್ಯ ಬಳಸಿಕೊಳ್ಳುವ ಬಗ್ಗೆ ಚರ್ಚೆ ನಡೆಸಿದ್ದೇವೆ. ಕೊರೋನಾ ಸಂಕಷ್ಟದ ಈ ಸಮಯದಲ್ಲಿ ಹೊರಹೊಮ್ಮುತ್ತಿರುವ ಹೊಸ ಕೆಲಸದ ಸಂಸ್ಕೃತಿಯ ಬಗ್ಗೆ ಕ್ರೀಡೆಯಂತಹ ಕ್ಷೇತ್ರಗಳಿಗೆ ತಂದಿರುವ ಸವಾಲುಗಳ ಬಗ್ಗೆ ಚರ್ಚೆ ನಡೆಸಿದ್ದೇವೆ. ದತ್ತಾಂಶ ಸುರಕ್ಷತೆ, ಸೈಬರ್ ಸುರಕ್ಷತೆಯ ಮಹತ್ವದ ಬಗ್ಗೆಯೂ ಚರ್ಚಿಸಿದ್ದೇವೆ ಎಂದು ಪ್ರಧಾನಿ ಟ್ವಿಟರ್‌ನಲ್ಲಿ ಬರೆದುಕೊಂಡಿದ್ದಾರೆ.

ವಿಡಿಯೋ ಕಾನ್ಫರೆನ್ಸ್ ಮೂಲಕ 6ನೇ 'ಗೂಗಲ್ ಫಾರ್ ಇಂಡಿಯಾ' ಕಾರ್ಯಕ್ರಮದಲ್ಲಿ ಮಾತನಾಡಿದ ಪಿಚ್ಛೈ ಮೋದಿಯವರ ದೂರದೃಷ್ಟಿಯನ್ನು ಬೆಂಬಲಿಸಲು ಹೆಮ್ಮೆ ಪಡುತ್ತೇವೆ. ಡಿಜಿಟಲ್ ಇಂಡಿಯಾ ಅಭಿವೃದ್ಧಿಗಾಗಿ ರೂ. 75,000 ಕೋಟಿಗಳನ್ನು ವಿನಿಯೋಗಿಸಲಾಗುವುದು. ಇದು ಭಾರತದ ಭವಿಷ್ಯ ಮತ್ತು ಡಿಜಿಟಲ್ ಆರ್ಥಿಕತೆಯ ಬಗೆಗಿನ ನಮ್ಮ ವಿಶ್ವಾಸದ ಪ್ರತಿಬಿಂಬವಾಗಿದೆ ಎಂದರು.

ಆಧಾರ:ಉದಯವಾಣಿ, ದಿನಾಂಕ:14.07.2020